# ನಗರಸಭಾ ಕಾರ್ಯಾಲಯ, ತುಮಕೂರು.

ನಂ.ನಸತು/ತಾಂಶಾ/ಟೆಂಡರ್/ಸೀಆರ್/402/2009–10 ದಿನಾಂಕ: 18–07–2009.

## ಅಲ್ಪಾವಧಿ ಟೆಂಡರ್ ಪ್ರಕಟಣೆ

ತುಮಕೂರು ನಗರಸಭಾ ವ್ಯಾಪ್ತಿಯ ದಿನನಿತ್ಯದ ನೀರು ಸರಬರಾಜು, ವಿತರಣೆ, ಲೀಕೇಜ್ ದುರಸ್ತಿಪಡಿಸಲು ವಾಲ್ವ್‌ಮನ್‌ಗಳ ಅವಶ್ಯಕತೆ ಇದ್ದು, ಹೊರಮೂಲದಿಂದ ಸಿಬ್ಬಂದಿಗಳನ್ನು ಪೂರೈಸಲು ಆಸಕ್ತಿಯುಳ್ಳ ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿತ ಟೆಂಡರ್‌ನಲ್ಲಿ ಭಾಗವಹಿಸಬಹುದು.

1. ಟೆಂಡರ್ ಫಾರಂಗಳನ್ನು ನೀಡುವ **ದಿನಾಂಕ 24–07–2009 ರಿಂದ 10–08–2009** ರವರಗೆಗೆ ಕಛೇರಿಯ ವೇಳೆಯಲ್ಲಿ ಟೆಂಡರ್ ಶುಲ್ಕ ಪಾವತಿಸಿದ ಅರ್ಹ ಗುತ್ತಿಗೆದಾರರಿಗೆ ನೀಡಲಾಗುವುದು.
2. ಭರ್ತಿ ಮಾಡಿದ ಫಾರಂಗಳನ್ನು **ದಿನಾಂಕ 11–08–2009 ರಂದು 4.30 ಗಂಟೆಯೊಳಗಾಗಿ** ಪೌರಾಯುಕ್ತರು, ನಗರಸಭೆ, ತುಮಕೂರು ರವರ ಕೊಠಡಿಯಲ್ಲಿ ಇಟ್ಟಿರುವ ಟೆಂಡರ್ ಬಾಕ್ಸ್‌ನಲ್ಲಿ ಅಥವಾ ಮಾನ್ಯ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ತುಮಕೂರು ರವರ ಕಛೇರಿಯ ಟೆಂಡರ್ ಬಾಕ್ಸ್‌ನಲ್ಲಿ ಹಾಕಬಹುದಾಗಿದೆ.
3. **ಸಲ್ಲಿಸಲಾಗಿರುವ ಟೆಂಡರ್‌ಗಳನ್ನು ಸಾಧ್ಯವಾದರೆ ದಿನಾಂಕ 11–08–2009 ರಂದು 4.45** ಗಂಟೆಗೆ ಹಾಜರಿರುವ ಗುತ್ತಿಗೆದಾರರ ಸಮ್ಮುಖದಲ್ಲಿ ತೆರೆಯಲಾಗುವುದು. ಅಥವಾ ಮರುದಿನ ಕಛೇರಿ ವೇಳೆಯಲ್ಲಿ ಹಾಜರಿರುವ ಗುತ್ತಿಗೆದಾರರ ಸಮ್ಮುಖದಲ್ಲಿ ತೆರೆಯಲಾಗುವುದು.

| ಕ್ರ.ಸಂ. | ಕಾಮಗಾರಿ ಹೆಸರು | ಅಂದಾಜು ಮೊತ್ತ (ಲಕ್ಷಗಳಲ್ಲಿ) | ಇಎಂಡಿ ಮೊತ್ತ ರೂಗಳಲ್ಲಿ | ಟೆಂಡರ್ ಫಾರಂ ಬೆಲೆ | ಗುತ್ತಿಗೆದಾರರು | ಕಾಲಾವಧಿ |
|---|---|---|---|---|---|---|
| 1 | **ಪ್ಯಾಕೇಜ್–1** ತುಮಕೂರು ನಗರಸಭಾ ವ್ಯಾಪ್ತಿಯಲ್ಲಿನ ವಾರ್ಡ್ ನಂ. 1 ರಿಂದ 6 ರವರೆಗಿನ ನೀರು ಸರಬರಾಜು, ವಿತರಣೆ, ಲೀಕೇಜ್ ದುರಸ್ತಿ ಮಾಡಲು ಹೊರಮೂಲದಿಂದ ಸಿಬ್ಬಂದಿಗಳನ್ನು ಸರಬರಾಜು ಮಾಡುವುದು. | 9.90 | 20000.00 | 1000+ ತೆರಿಗೆ | ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರು | 1 ವರ್ಷ |
| 2 | **ಪ್ಯಾಕೇಜ್–2** ತುಮಕೂರು ನಗರಸಭಾ ವ್ಯಾಪ್ತಿಯಲ್ಲಿನ ವಾರ್ಡ್ ನಂ. 6 ರಿಂದ 12 ರವರೆಗಿನ ನೀರು ಸರಬರಾಜು, ವಿತರಣೆ, ಲೀಕೇಜ್ ದುರಸ್ತಿ ಮಾಡಲು ಹೊರಮೂಲದಿಂದ ಸಿಬ್ಬಂದಿಗಳನ್ನು ಸರಬರಾಜು ಮಾಡುವುದು. | 9.90 | 20000.00 | 1000+ ತೆರಿಗೆ | ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರು | 1 ವರ್ಷ |
| 3 | **ಪ್ಯಾಕೇಜ್–3** ತುಮಕೂರು ನಗರಸಭಾ ವ್ಯಾಪ್ತಿಯಲ್ಲಿನ ವಾರ್ಡ್ ನಂ. 13 ರಿಂದ 18 ರವರೆಗಿನ ನೀರು ಸರಬರಾಜು, ವಿತರಣೆ, ಲೀಕೇಜ್ ದುರಸ್ತಿ ಮಾಡಲು ಹೊರಮೂಲದಿಂದ ಸಿಬ್ಬಂದಿಗಳನ್ನು ಸರಬರಾಜು ಮಾಡುವುದು. | 9.90 | 20000.00 | 1000+ ತೆರಿಗೆ | ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರು | 1 ವರ್ಷ |
| 4 | **ಪ್ಯಾಕೇಜ್–4** ತುಮಕೂರು ನಗರಸಭಾ ವ್ಯಾಪ್ತಿಯಲ್ಲಿನ ವಾರ್ಡ್ ನಂ. 19 ರಿಂದ 24 ರವರೆಗಿನ ನೀರು ಸರಬರಾಜು, ವಿತರಣೆ, ಲೀಕೇಜ್ ದುರಸ್ತಿ ಮಾಡಲು ಹೊರಮೂಲದಿಂದ ಸಿಬ್ಬಂದಿಗಳನ್ನು ಸರಬರಾಜು ಮಾಡುವುದು. | 9.90 | 20000.00 | 1000+ ತೆರಿಗೆ | ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರು | 1 ವರ್ಷ |

| | | | | | | |
|---|---|---|---|---|---|---|
| 5 | **ಪ್ಯಾಕೇಜ್–5** ತುಮಕೂರು ನಗರಸಭಾ ವ್ಯಾಪ್ತಿಯಲ್ಲಿನ ವಾರ್ಡ್ ನಂ. 25 ರಿಂದ 30 ರವರೆಗಿನ ನೀರು ಸರಬರಾಜು, ವಿತರಣೆ, ಲಿಕೇಜ್ ದುರಸ್ತಿ ಮಾಡಲು ಹೊರಮೂಲದಿಂದ ಸಿಬ್ಬಂದಿಗಳನ್ನು ಸರಬರಾಜು ಮಾಡುವುದು. | 9.90 | 20000.00 | 1000+ ತೆರಿಗೆ | ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರು | 1 ವರ್ಷ |
| 6 | **ಪ್ಯಾಕೇಜ್–6** ತುಮಕೂರು ನಗರಸಭಾ ವ್ಯಾಪ್ತಿಯಲ್ಲಿನ ವಾರ್ಡ್ ನಂ. 31 ರಿಂದ 35 ರವರೆಗಿನ ನೀರು ಸರಬರಾಜು, ವಿತರಣೆ, ಲಿಕೇಜ್ ದುರಸ್ತಿ ಮಾಡಲು ಹೊರಮೂಲದಿಂದ ಸಿಬ್ಬಂದಿಗಳನ್ನು ಸರಬರಾಜು ಮಾಡುವುದು. | 8.00 | 16000.00 | 1000+ ತೆರಿಗೆ | ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರು | 1 ವರ್ಷ |

## ಷರತ್ತುಗಳು

1. ಗುತ್ತಿಗೆದಾರರು ತಮ್ಮ ಸಂಸ್ಥೆ ವತಿಯಿಂದ ಇಎಸ್‌ಐ, ಪಿಎಫ್‌ಐ ಮತ್ತು ಸೇವಾ ತೆರಿಗೆಗಳನ್ನು ಪಾವತಿಸಲು ಸಂಬಂಧಪಟ್ಟ ಇಲಾಖೆಯಲ್ಲಿ ನೊಂದಾಯಿತರಾಗಿರುವ ಬಗ್ಗೆ ವಿವರಣೆಯನ್ನು ಹಾಗೂ ದಾಖಲಾತಿಯನ್ನು ಟೆಂಡರ್ ದರಪಟ್ಟಿಯೊಂದಿಗೆ ಲಗತ್ತಿಸಿ ಸಲ್ಲಿಸಬೇಕಾಗಿರುತ್ತದೆ. ಮತ್ತು ಟೆಂಡರ್ ಅನುಮೋದನೆ ಆದ ಗುತ್ತಿಗೆದಾರರು ನಗರಸಭೆಯಲ್ಲಿ ಈ ಹಿಂದೆ ನೀರು ಸರಬರಾಜು ವಿಭಾಗದಲ್ಲಿ ಹೊರ ಮೂಲದಿಂದ ಹಾಗೂ ತಾತ್ಕಾಲಿಕವಾಗಿ ಸೇವೆ ಸಲ್ಲಿಸಿದ ಕೆಲಸಗಾರರಿಗೆ ಆದ್ಯತೆ ನೀಡಿ ಅವರ ಸೇವೆಯನ್ನು ನಗರಸಭೆಗೆ ಒದಗಿಸತಕ್ಕದ್ದು. ಹಾಗೂ ಅವರಿಗೆ ಯಾವುದೇ ರೀತಿಯ ಕಿರುಕುಳ ನೀಡತಕ್ಕದ್ದಲ್ಲ.
2. 115 ಕೆಲಸಗಾರರ ಪೈಕಿ ಯಾರಾದರು ಗೈರು ಹಾಜರಾಗಿದ್ದಲ್ಲಿ ಬದಲಿ ವ್ಯವಸ್ಥೆಯನ್ನು ಮಾಡತಕ್ಕದ್ದು.
3. ಕನಿಷ್ಟ ವೇತನ ಅಡಿಯ ಕಾಯ್ದೆಯ ಮೇರೆಗೆ ಅಂಥ ಕೆಲಸಗಾರರಿಗೆ ಕಾಲ ಕಾಲಕ್ಕೆ ನಿಗದಿಪಡಿಸಲಾಗಿರುವ ಕನಿಷ್ಟ ವೇತವನ್ನು ನಗರಸಭೆಯ / ಕಾರ್ಮಿಕ ಇಲಾಖೆ ಅಧಿಕಾರ ಸಮಕ್ಷಮ ಪ್ರತಿ ಮಾಹೆಯ ನಿಗದಿತ ದಿನಾಂಕದೊಳಗೆ ಪಾವತಿಸತಕ್ಕದ್ದು. ಹಾಗೂ ಕಾರ್ಮಿಕ ಇಲಾಖೆ ನಿಯಮಾನುಸಾರ ಸದರಿ ಕೆಲಸಗಾರರಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು (ಇಪಿಎಫ್, ವಿಮೆ ಪ್ರಿಮಿಯಂ ಇತ್ಯಾದಿ) ಒದಗಿಸತಕ್ಕದ್ದು.
4. ನಿಯಮಾನುಸಾರವಾಗಿ ವೇತನ ಹಾಗೂ ಇತರೆ ಸೌಲಭ್ಯಗಳನ್ನು ಕೆಲಸಗಾರರಿಗೆ ನಿಗದಿತ ದಿನಾಂಕದೊಳಗೆ ಪಾವತಿಸದಿದ್ದಲ್ಲಿ ಕಂಟ್ರಾಕ್ಟ್ ಲೇಬರ್ (ರೆಗ್ಯುಲೇಷನ್ ಅಂಡ್ ಅಬಾಲಿಷನ್) ಅಧಿನಿಯಮ 1970ರ ಅಡಿಯಲ್ಲಿ ಸೂಕ್ತವಾಗಿ ನಿರ್ಧರಿಸಿ ಕೆಲಸಗಾರರಿಗೆ ವೇತನ ಮತ್ತು ಇತರೆ ಸೌಲಭ್ಯಗಳನ್ನು ನಗರಸಭೆಯ ವತಿಯಿಂದಲೇ ಪಾವತಿಸಿ ಸದರಿ ವೆಚ್ಚವನ್ನು ಗುತ್ತಿಗೆದಾರರಿಂದ ವಸೂಲಾತಿ ಮಾಡಲಾಗುವುದು.
5. ಟೆಂಡರ್ ಅನುಮೋದನೆ ಆದ ಗುತ್ತಿಗೆದಾರರು ಭದ್ರತಾ ಠೇವಣಿ ಆಗಿ 10,000/– ರೂ.ಗಳನ್ನು ಪೌರಾಯುಕ್ತರು, ನಗರಸಭೆ, ತುಮಕೂರು ರವರ ಹೆಸರಿನಲ್ಲಿ ಡಿ.ಡಿ.ಯನ್ನು ಟೆಂಡರ್ ಕರಾರು ಮಾಡಿಕೊಳ್ಳುವ ಸಮಯದಲ್ಲಿ ಸಲ್ಲಿಸತಕ್ಕದ್ದು.
6. ಟೆಂಡರ್ ಅರ್ಜಿಯನ್ನು ಸಲ್ಲಿಸುವಾಗ ಕಾರ್ಮಿಕ ಇಲಾಖೆಯಲ್ಲಿ ಅರ್ಹ ದರ್ಜೆ ನೊಂದಾಯಿತರಾಗಿರುವ ಬಗ್ಗೆ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು.
7. ನಿಬಂಧನೆಗಳನ್ನು ನಮೂದಿಸಿ ಸಲ್ಲಿಸುವ ಟೆಂಡರುಗಳನ್ನು ತಿರಸ್ಕರಿಸಲಾಗುವುದು.
8. ಗುತ್ತಿಗೆದಾರರು ಸರಬರಾಜು ಮಾಡುವ ಕೆಲಸಗಾರರಿಗೆ ಗುರುತಿನ ಚೀಟಿ ಮತ್ತು ಸಮವಸ್ತ್ರಗಳನ್ನು ಧರಿಸಲು ನೀಡಬೇಕು.
9. ಯಾವ ಕಾರಣವನ್ನು ಸಹ ನೀಡದೆ ಅಥವಾ ಎಲ್ಲಾ ಟೆಂಡರ್‌ಗಳನ್ನು ತಿರಸ್ಕರಿಸುವ ಅಧಿಕಾರವನ್ನು ನಗರಸಭೆ ಕಾಯ್ದಿರಿಸಿಕೊಂಡಿದೆ.
10. ಮೇಲ್ಕಂಡ ವಿಷಯದಲ್ಲಿ ಏನಾದರು ಸೇರ್ಪಡೆ ಅಥವಾ ಮಾರ್ಪಡಿಸುವ ಹಕ್ಕನ್ನು ನಗರಸಭೆ ಕಾಯ್ದಿರಿಕೊಂಡಿದೆ.
11. ಗುತ್ತಿಗೆಯ ಕಾರ್ಯಾದೇಶ ಪಡೆದ ದಿನಾಂಕದಿಂದ ಒಂದು ವರ್ಷದ ಅವಧಿಗೆ ಚಾಲ್ತಿಯಲ್ಲಿರುತ್ತೆ.
12. ಹೆಚ್ಚಿನ ವಿಷಯಗಳಿಗೆ ನಗರಸಭೆಯ ಕಛೇರಿಯ ಅಭಿಯಂತರರ ಶಾಖೆಯಲ್ಲಿ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.
13. ಕಾಲಕಾಲಕ್ಕೆ ಕಾರ್ಮಿಕ ಇಲಾಖೆಯಿಂದ ನೀಡುವ ಸೂಚನೆಗಳಿಗೆ ನೀವು ಬದ್ದರಾಗಿರಬೇಕು.

| | | | |
|---|---|---|---|
| **ಅಧ್ಯಕ್ಷರು** | **ಉಪಾಧ್ಯಕ್ಷರು** | **ಸ್ಥಾಯಿಸಮಿತಿ ಅಧ್ಯಕ್ಷರು** | **ಪೌರಾಯುಕ್ತರು** |
| **ನಗರಸಭೆ, ತುಮಕೂರು.** | **ನಗರಸಭೆ, ತುಮಕೂರು.** | **ನಗರಸಭೆ, ತುಮಕೂರು.** | **ನಗರಸಭೆ, ತುಮಕೂರು.** |